**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.990/2025.**

ಪಿರ್ಯಾದುದಾರರುಃ- ಸಿಂಧ್ ಸೌಹಾರ್ದ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ಲಿ,
ಮಂಕಿ, ತಾಲೂಕುಃ ಹೊನ್ನಾವರ,
ಪ್ರತಿನಿಧಿಸುವವರು, ನಿಷ್ಪತ್ ಮ್ಯಾನೇಜರ,
ಗಣಪತಿ ನಾಯ್ಕ,

**-ವಿರುದ್ಧ-**

ಆರೋಪಿಯ ಹೆಸರುಃ- ಧರ್ಮ ನಾರಾಯಣ ನಾಯ್ಕ,
ಸಾಕೀನಃ- ಜನತಾ ಕಾಲೋನಿ, ಪೋಸ್ಟಃ ಮಂಕಿ,
ತಾಲೂಕುಃ- ಹೊನ್ನಾವರ, (ಉ.ಕ.).

**ಆಪಾದನೆ**

ಶ್ರೀ ಅನಿಲ್ ಜೋನ್ ಸಿಕ್ವೇರಾ., ಬಿ.ಬಿ.ಎ.,ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯಾದ ನಾನು ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡ ಆಪಾದನೆ ಹೊರಿಸುತ್ತಿದ್ದೇನೆ.

ಆರೋಪಿಯಾದ ನೀವು ಪಿರ್ಯಾದಿಯವರ ಸಂಸ್ಥೆಯಲ್ಲಿ ಸಾಲದ ಖಾತೆ ಸಂಖ್ಯೆ 3300014 ರಲ್ಲಿ ರೂ.50,000/- ಸಾಲವನ್ನು ದಿನಾಂಕಃ 11-12-2023 ರಂದು ಪಡೆದುಕೊಂಡಿದ್ದು, ಸದರಿ ಸಾಲಕ್ಕೆ ಸಂಬಂಧಪಟ್ಟಂತೆ ನೀವು ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕೆನರಾ ಬ್ಯಾಂಕ್., ಮಂಕಿ** ಶಾಖೆಯ ಚೆಕ್ ನಂ.754342 ನ್ನು ದಿನಾಂಕ 18-03-2025 ರಂದು ರೂ.42,732/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿದ್ದು, ಅದರಂತೆ ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ಕೆನರಾ ಡಿ.ಸಿ.ಸಿ ಬ್ಯಾಂಕ್., ಮಂಕಿ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, '**Funds Insufficient**' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 29-04-2025 ರಂದು ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ. ಈ ಕುರಿತು ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 13-05-2025 ರಂದು ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್ ನಿಮಗೆ ದಿನಾಂಕ 29-05-2025 ರಂದು ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್

ನಲ್ಲಿ ನಮೂದಿಸಿದ ಹಣವನ್ನು ಸಹ ನೀಡದೇ ನೆಗೋಶಿಯೇಬಲ್ ಇನ್ ಸ್ಟ್ರುಮೆಂಟ್ ಕಾಯಿದೆ ಕಲಂ. 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುತ್ತೀರೆಂದು ಆರೋಪಿಸಲಾಗಿದೆ.

ಪ್ರಶ್ನೆ1: ಈಗ ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೇ?

ಆರೋಪಿಯ ಉತ್ತರ : ತಿಳಿಯಿತು

ಪ್ರಶ್ನೆ 2: ಸದ್ರಿ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೇ?

ಆರೋಪಿಯ ಉತ್ತರ : ವಿಚಾರಣೆಯಾಗಬೇಕು

(ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ )

ಸಹಿ ಇದೆ/-

**ದಿನಾಂಕಃ- 28-01-2026.**

**(ಅನಿಲ್ ಜೋನ್ ಸಿಕ್ವೇರಾ)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ.,ಯವರ ನ್ಯಾಯಾಲಯ.,ಹೊನ್ನಾವರ.**

****

ಆರೋಪಿಯ ಸಹಿಃ- ಸಹಿ ಇದೆ